ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:09:ಯೋಜನೆ:2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:22.02.2018

# ಸೇರ್ಪಡೆ ಆದೇಶ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಬಳಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಸಮ ಸಂಖ್ಯೆ ಅನುದಾನ ಬಿಡುಗಡೆ ಆದೇಶಗಳ ದಿ:10.07.2017, 28.10.2017 ಮತ್ತು 12.02.2018
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಪತ್ರಗಳು

* * * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ದೂರವಾಣಿ ವೆಚ್ಚ, ಅನ್‌ಸ್ಕಿಲ್ಡ್ ನೌಕರರ ಸಂಭಾವನೆ, ಕಛೇರಿ ವೆಚ್ಚ, ವಿದ್ಯುತ್ ಮತ್ತು ನೀರಿನ ವೆಚ್ಚ ಹಾಗೂ ಇತರೆ ವೆಚ್ಚಗಳಿಗಾಗಿ ಉಲ್ಲೇಖ-1ರ ಆದೇಶಗಳಲ್ಲಿ ಲೆಕ್ಕಶೀರ್ಷಿಕೆ:2202-03-103-2-01-059 ರಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಉಲ್ಲೇಖ-1ರ ಆದೇಶಗಳಲ್ಲಿ ವಿಧಿಸಿರುವ ಷರತ್ತುಗಳೊಂದಿಗೆ ಈ ಕೆಳಕಂಡ ಅಂಶವನ್ನು ಸೇರ್ಪಡೆಗೊಳಿಸಿ ಓದಿಕೊಳ್ಳತಕ್ಕದ್ದು.

"ಇಲಾಖೆಯಿಂದ ಮೇಲ್ಕಂಡ ವೆಚ್ಚಗಳಿಗಾಗಿ ಅನುದಾನ ಬಿಡುಗಡೆ ಮಾಡುವವರೆಗೂ ಈ ವೆಚ್ಚಗಳಿಗೆ ಆಯಾ ಕಾಲೇಜುಗಳ ಅರೆಸರ್ಕಾರಿ ಖಾತೆಗಳಿಂದ ಪಾವತಿಸಲಾಗಿರುತ್ತದೆ. ಬಿಡುಗಡೆ ಮಾಡಿರುವ ಅನುದಾನವನ್ನು ಅರೆಸರ್ಕಾರಿ ಖಾತೆಗಳಿಗೆ ಪುನರ್ ಜಮೆ ಮಾಡಲು ಖಜಾನೆ-2ರ ಈಗಿನ ವ್ಯವಸ್ಥೆಯಲ್ಲಿ ಬದಲಾವಣೆಯಾಗಿರುವುದರಿಂದ ಬಿಡುಗಡೆ ಮಾಡಿರುವ ಅನುದಾನವನ್ನು ಡಿ.ಸಿ ಬಿಲ್ಲಿನಲ್ಲಿ ಸೆಳೆದು ಪ್ರಾಂಶುಪಾಲರ ಖಾತೆಗೆ ಜಮೆ ಮಾಡಿ ನಂತರ ಅರೆಸರ್ಕಾರಿ ಖಾತೆಗಳಿಗೆ ಪುನರ್ ಜಮೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲು ಆಯಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅನುಮತಿ ನೀಡಲಾಗಿದೆ".

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
2. ಮ್ಯಾನೇಜರ್, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ

Plan_09_2017-18